ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-

607 (645) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಮೂಲಭೂತ ಸೌಲಭ್ಯಗಳ ಕೊರತೆ ಇರುವ ವಸತಿ ಶಾಲೆಗಳ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ;

(ಇ) ಬಾಡಿಗೆ ಕಟ್ಟಡದಲ್ಲಿ ಹಾಗೂ ಸ್ವಂತ ಕಟ್ಟಡದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ವಿವರಗಳನ್ನು ಜಿಲ್ಲಾವಾರು ಒದಗಿಸುವುದು ;

(ಈ) ಲೇಖನ ಸಾಮಗ್ರಿಗಳು, ಆಹಾರ ಪದಾರ್ಥಗಳು, ತಟ್ಟೆ, ಲೋಟದ ವ್ಯವಸ್ಥೆಗಳನ್ನು ಸಕಾಲದಲ್ಲಿ ಕಲ್ಪಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಸೌಲಭ್ಯಗಳನ್ನು ಸಕಾಲದಲ್ಲಿ ಕಲ್ಪಿಸದೆ ಇರಲು ಕಾರಣಗಳೇನು;

(ಊ) ಸಕಾಲದಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ?